# ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ

**ಸಿ.ಸಿ ನಂಬ್ರಃ 3002/2019**

ಸರ್ಕಾರದ ಪರ
ಕೋಟ ಠಾಣಾ ಪೊಲೀಸರು. --- ಫಿರ್ಯಾದಿದಾರರು

-ಮತ್ತು-

ಅಶೋಕ ಶೆಟ್ಟಿ ಮತ್ತು ಇನ್ನೊಬ್ಬರು --- ಆರೋಪಿತರು

**ಃದೋಷಾರೋಪಣೆಃ**

**ಶ್ರೀಮತಿ ರೋಹಿಣಿ .ಡಿ. ಬಿ.ಎ., ಎಲ್‌ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ದೋಷಾರೋಪಣೆ ಏನೆಂದರೆಃ**

1. ಅಶೋಕ ಶೆಟ್ಟಿ, 58 ವರ್ಷ,
ತಂದೆಃ ದಿ. ಜಗನ್ನಾಥ ಶೆಟ್ಟಿ,
ವಾಸಃ ಕಂಬಳಗದ್ದೆ ಮನೆ, ಬನ್ನಾಡಿ
ಉಡುಪಿ,
ಕರ್ನಾಟಕ.

2. ಪ್ರಫುಲ್ಲಾ ಶೆಟ್ಟಿ, 50 ವರ್ಷ,
ಗಂಡಃ ಅಶೋಕ ಶೆಟ್ಟಿ,
ವಾಸಃ ತೆಂಕಬೈಲು ದೇವಸ್ಥಾನ ಬೆಟ್ಟು,
ಬೆಲೂರು,
ಉಡುಪಿ,
ಕರ್ನಾಟಕ.

ಕೋಟ ಪೋಲಿಸ್ ಠಾಣಾ ಸರಹದ್ದಿನಲ್ಲಿ, ಬೆಳೂರು ಗ್ರಾಮದ ತೆಂಕು ಮನೆ ದೇವಸ್ಥಾನದ ಬೆಟ್ಟುವಿನಲ್ಲಿರುವ ಚಾ.ಸಾ. 1/ಪದ್ಮಾವತಿ ಶೆಟ್ಟಿ ರವರು ವಾಸವಿರುವ ಮನೆಯ ಎದುರು ದಿ. 26-12-2019 ರಂದು ಸುಮಾರು ಸಂಜೆ 06.00 ಗಂಟೆ ಸಮಯಕ್ಕೆ, 1 ಮತ್ತು 2 ನೇ ಆರೋಪಿತರಾದ ನೀವುಗಳು ಸಮಾನ ಉದ್ದೇಶದಿಂದ ಸರ್ವೆ ನಂಬ್ರ 2561/14 ರಲ್ಲಿ 0.2 ಎಕರೆ ಆಸ್ತಿಗೆ ಅಕ್ರಮ ಪ್ರವೇಶ ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 447 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

2. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ 1 ಮತ್ತು 2 ನೇ ಆರೋಪಿತರಾದ ನೀವುಗಳು ಸಮಾನ ಉದ್ದೇಶದಿಂದ, ಚಾ.ಸಾ. 1/ಪದ್ಮಾವತಿ ಶೆಟ್ಟಿ ರವರ ಮೈಗೆ ಕೈ ಹಾಕಿ ಜುಟ್ಟನ್ನು ಹಿಡಿದು ನೆಲಕ್ಕೆ ದೂಡಿ ಮಾನ ಹಾನಿ ಉಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

3. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವು ಸಮಾನ ಉದ್ದೇಶ ಮುಂದುವರೆಸಿ, ಚಾ.ಸಾ. 1/ಪದ್ಮಾವತಿ ಶೆಟ್ಟಿ ರವರು ಕುಪಿತಗೊಂಡು ಶಾಂತಿಭಂಗವನ್ನುಂಟುಮಾಡಲೆಂಬ ಉದ್ದೇಶದಿಂದ ಚಾ.ಸಾ. 1/ಪದ್ಮಾವತಿ ಶೆಟ್ಟಿ ರವರನ್ನು ಉದ್ದೇಶಿಸಿ ತಮ್ಮ ಆಸ್ತಿಯ ಜಾಗದಲ್ಲಿ ಮನೆ ಕಟ್ಟಲು ಬಿಡುವುದಿಲ್ಲ ಎಂದು ಹೇಳಿ ರಂಡೆ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

4. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವುಗಳು, ಸಮಾನ ಉದ್ದೇಶದಿಂದ ಚಾ.ಸಾ. 1/ಪದ್ಮಾವತಿ ಶೆಟ್ಟಿ ರವರನ್ನುದ್ದೇಶಿಸಿ " ಕೂಡಲೇ ಜಾಗ ಖಾಲಿ ಮಾಡದೇ ಇದ್ದಲ್ಲಿ ನಿಮ್ಮನ್ನು ಕೊಂದು ಹಾಕುತ್ತೇನೆ" ಎಂದು ಜೀವ ಬೆದರಿಕೆ ಹಾಕಿ ಅಪರಾಧಿಕ ಭಾಯೋತ್ಪಾದನೆಯನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿ. 26.03.2024.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ನ್ಯಾಯಾಲಯ, ಕುಂದಾಪುರ

**ಸಿ.ಸಿ. ಸಂಖ್ಯೆ: 3002/2019**

**ಫಿರ್ಯಾದುದಾರರು:** ಸರಕಾರದ ಪರವಾಗಿ ಕೋಟ ಠಾಣಾ ಪೋಲಿಸರು,

**- ವಿರುದ್ಧ -**

**ಆರೋಪಿ** :1. ಅಶೋಕ ಶೆಟ್ಟಿ, ತಂದೆ: ದಿ. ಜಗನ್ನಾಥ ಶೆಟ್ಟಿ,

**1. ನಿಮಗೆ ಓದಿ ಹೇಳಿದ ದೋಷಾರೋಪಣೆಯು ಅರ್ಥವಾಗಿದೆಯೇ ?**

**ಉ.**

**2. ನೀವು ತಪ್ಪನ್ನು ಒಪ್ಪಿಕೊಳ್ಳುತ್ತೀರ ಅಥವಾ ವಿಚಾರಣೆ ಮಾಡ ಬಯಸುವಿರಾ ?**

**ಉ.**

**ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಆರೋಪಿ ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಅವು ಸರಿಯಾಗಿರುತ್ತವೆಂದು ಈ ಮೂಲಕ ದೃಢೀಕರಿಸುತ್ತೇನೆ.**

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕುಂದಾಪುರ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ನ್ಯಾಯಾಲಯ, ಕುಂದಾಪುರ

**ಸಿ.ಸಿ. ಸಂಖ್ಯೆ: 3002/2019**

**ಫಿರ್ಯಾದುದಾರರು:** ಸರಕಾರದ ಪರವಾಗಿ ಕೋಟ ಠಾಣಾ ಪೋಲಿಸರು,

**- ವಿರುದ್ಧ -**

**ಆರೋಪಿ** :2. ಪ್ರಫುಲ್ಲಾ ಶೆಟ್ಟಿ, ಗಂಡ: ಅಶೋಕ ಶೆಟ್ಟಿ,

**1. ನಿಮಗೆ ಓದಿ ಹೇಳಿದ ದೋಷಾರೋಪಣೆಯು ಅರ್ಥವಾಗಿದೆಯೇ ?**

**ಉ.**

**2. ನೀವು ತಪ್ಪನ್ನು ಒಪ್ಪಿಕೊಳ್ಳುತ್ತೀರ ಅಥವಾ ವಿಚಾರಣೆ ಮಾಡ ಬಯಸುವಿರಾ ?**

**ಉ.**

**ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಆರೋಪಿ ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಅವು ಸರಿಯಾಗಿರುತ್ತವೆಂದು ಈ ಮೂಲಕ ದೃಢೀಕರಿಸುತ್ತೇನೆ.**

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕುಂದಾಪುರ.